ಅಸಲು ದಾವಾ ಸಂಖ್ಯೆ **44/2022** ಪಿ.ಡಬ್ಲ್ಯೂ- **1**

ಸಾಕ್ಷಿಯನ್ನು ಪುನಃ ಕರೆಸಿ ಪ್ರಮಾಣೀಕರಿಸಲಾದ ದಿನಾಂಕ **20.08.2025**

ಪಾಟೀ ಸವಾಲು ಃ ಶ್ರೀ **NSA** ನ್ಯಾಯಾವಾದಿಗಳಿಂದ ಃ

ದಾವಾ ಸ್ವತ್ತಿಗೂ ಮತ್ತು ಮಲ್ಲಸಂದ್ರ ಕಾವಲು ಎಲ್ಲೆ ಮಧ್ಯ ಪ್ರತಿವಾದಿಗಳ ಸ್ವತ್ತು ಇದೆ ಎಂದರೆ ಸಾಕ್ಷಿಯು 2007 ರಲ್ಲಿ ನಾವು ಕ್ರಯಕ್ಕೆ ಪಡೆದ ದಿನದಿಂದು ಯಾರು ಇರಲಿಲ್ಲ ಎಂದು ಇತ್ತೀಚೆಗೆ ಪ್ರತಿವಾದಿಗಳು ಬಂದಿರುವುದಾಗಿ ನುಡಿಯುತ್ತಾರೆ. ಪ್ರತಿವಾದಿಗಳು ಯಾರು ಎಂದೇ ನನಗೆ ಗೊತ್ತಿಲ್ಲ ಏಕಾಏಕಿ ನಮ್ಮ ಜಮೀನಿನ ಅರ್ಧ ಭಾಗಕ್ಕೆ ತಂತಿ ಕಂಬಗಳನ್ನು ಹಾಕಲು ಪ್ರಯತ್ನಿಸಿರುತ್ತಾರೆ. ದಾವಾ ಆಸ್ತಿಯನ್ನು 1 ಮತ್ತು 2 ನೇ ಪ್ರತಿವಾದಿಗಳ ತಂದೆ ಬೋರೆಗೌಡರವರು ನಮಗೆ ಕೊಡಿಸಿರುತ್ತಾರೆ ಎಂದರೆ ಸರಿಯಲ್ಲ.

2. ವಾದ ಪತ್ರದಲ್ಲಿ ದಾವಾ ಆಸ್ತಿಯಲ್ಲಿ ನಾವು ಹಲವು ಜಾತಿಯ ಮರಗಳನ್ನು ಬೆಳೆಸಿದ್ದೇವೆ ಎಂದು ಹೇಳಿರುವುದು ಸುಳ್ಳು ಎಂದರೆ ಸರಿಯಲ್ಲ. ಸುಮಾರು 18 ವರ್ಷಗಳ ಹಿಂದೆ ಮಾವಿನ ಮರಗಳನ್ನು ಸುಮಾರ 13-14 ವರ್ಷಗಳಿಂದ , ತೆಂಗಿನ ಮರಗಳನ್ನು ಬೆಳೆಸಿರುತ್ತೇವೆ ಸಾಕ್ಷಿ ಮುಂದುವರೆದು ದಾವಾ ಆಸ್ತಿಯ ಸುತ್ತಲೂ ತಂತಿಯ ಬೇಲಿಯನ್ನು ಹಾಕಿಸಿರುವುದಾಗಿ ನುಡಿಯುತ್ತಾರೆ.

3. ದಾವಾ ಸ್ವತ್ತಿನ ದಕ್ಷಿಣಕ್ಕೆ ಪ್ರತಿವಾದಿಗಳಿಗೆ ಸೇರಿದ 4 ಎಕರೆ ಜಮೀನು ಇದ್ದು , ಪ್ರತಿವಾದಿಗಳು ಇಲ್ಲದೇ ಇದ್ದಂತಹ ಸಂದರ್ಭದಲ್ಲಿ ನಾವೇ ಪ್ರತಿವಾದಿಗಳ ಜಮೀನಿಗೆ ಅತೀಕ್ರಮ ಪ್ರವೇಶ ಮಾಡಿ ಅವರ ಸ್ವಾಧೀನಾನುಭವಕ್ಕೆ ತೊಂದರೆ ಕೊಟ್ಟಿರುತ್ತೇವೆ ಎಂದರೆ ಸರಿಯಲ್ಲ. ಪ್ರತಿವಾದಿಗಳು ಯಾವತ್ತು ದಾವಾ ಸ್ವತ್ತಿನ ಸ್ವಾಧೀನಾನುಭವಕ್ಕೆ ತೊಂದರೆ ಕೊಟ್ಟಿಲ್ಲದಿದ್ದರು ಅನವಶ್ಯಕವಾಗಿ ಪ್ರತಿವಾದಿಗಳಿಗೆ ತೊಂದರೆ ಕೊಡುವ ಸಲುವಾಗಿ ಈ ಸುಳ್ಳು ದಾವೆಯನ್ನು ಸಲ್ಲಿಸಿ ಅದಕ್ಕೆ ಪೂರಕವಾಗಿ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪ್ರತಿವಾದಿಗಳು ತಮ್ಮ ಜಮೀನನ್ನು ಉಳುಮೆ ಮಾಡುತ್ತಿರುವಾಗ ನಾವೇ ಅವರಿಗೆ ತೊಂದರೆ ಕೊಟ್ಟಿರುತ್ತೇವೆ ಎಂದರೆ ಸರಿಯಲ್ಲ, ಸಾಕ್ಷಿಯು ಮುಂದುವರೆದು ನಮ್ಮ ಜಮೀನಿಗೆ ಹಾಕಿಕೊಂಡಿರುವ ತಂತಿ ಬೇಲಿಯ ಒಳಗಡೆ ಪ್ರತಿವಾದಿಗಳು ಪ್ರವೇಶ ಮಾಡಲು ಪ್ರಯತ್ನಿಸುವ ಮೂಲಕ ದಾವಾ ಸ್ವತ್ತಿನ ಸ್ವಾಧೀನಾನುಭವಕ್ಕೆ ತೊಂದರೆ ನೀಡಿರುತ್ತಾರೆ ಎಂದು ನುಡಿಯುತ್ತಾರೆ.

ಮರು ವಿಚಾರಣೆ ಇಲ್ಲ:

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು)

ಸಾ. ಹೇ. ಬೆ. ಮಾಡಿಸಲಾಯಿತು.

ಓ.ಹೇ.ಕೇ.ಸ.ಇದೆ

ಅಪರ ಸಿವಿಲ್ ನ್ಯಾಯಾಧೀಶರು
ನಾಗಮಂಗಲ